ಕ್ರಿಮಿನಲ್ ಕೇಸ್ ದಾಖಲಿಸಲಾಗಿದೆ. 324 ಪ್ರಕರಣಗಳಲ್ಲಿ ಹಣ ವಸೂಲಿ ಮಾಡಲಾಗಿದೆ. ಉಳಿದ 403 ಪ್ರಕರಣಗಳಲ್ಲಿ ವಸೂಲಾತಿಗೆ ಅನುಸರಣಾ ಕ್ರಮ ಜರುಗಿಸಲಾಗಿದೆ.

ರಾಜ್ಯದಲ್ಲಿರುವ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳು

137(177) ಶ್ರೀ ಕೃಷ್ಣಪ್ಪ ವಿ. (ದೊಡ್ಡಬಳ್ಳಾಪುರ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಜಿಲ್ಲಾ ಸಹಕಾರ ಕೇಂದ್ರ ಸಹಕಾರ ಬ್ಯಾಂಕುಗಳೆಷ್ಟು? ಹೊಸ ಜಿಲ್ಲೆಗಳಲ್ಲಿ ಸಹಕಾರ ಬ್ಯಾಂಕುಗಳನ್ನು ಪ್ರಾರಂಭಿಸಲಾಗಿದೆಯೇ? ಹಾಗಿದ್ದಲ್ಲಿ ಅವು ಯಾವುವು?

ಆ) ಇದರಲ್ಲಿ ಲಾಭದಾಯಕದಲ್ಲಿರುವ ಬ್ಯಾಂಕುಗಳು ಎಷ್ಟು? ನಷ್ಟದಲ್ಲಿರುವ ಬ್ಯಾಂಕುಗಳೆಷ್ಟು? ಹಣ ದುರುಪಯೋಗವಾಗಿರುವ ಬ್ಯಾಂಕುಗಳು ಎಷ್ಟು?

ಇ) ಹಣ ದುರುಪಯೋಗದ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಹೆಚ್. ವಿಶ್ವನಾಥ್ (ಸಹಕಾರ ಸಚಿವರು):

ಅ) ರಾಜ್ಯದಲ್ಲಿ 20 ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಿವೆ. ಹೊಸ ಜಿಲ್ಲೆಗಳ ಪೈಕಿ ದಾವಣಗೆರೆ ಜಿಲ್ಲೆಯಲ್ಲಿ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕನ್ನು ಪ್ರಾರಂಭಿಸಲಾಗಿದೆ.

ಆ) ದಿನಾಂಕ:31-3-2002ಕ್ಕೆ 17 ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳು ಲಾಭದಲ್ಲಿವೆ. ಹಾಗೂ 3 ಜಿಲ್ಲಾ ಕೇಂದ್ರ ಸಹಕಾರ ಸಹಕಾರ ಬ್ಯಾಂಕುಗಳು ನಷ್ಟದಲ್ಲಿದೆ. ಎಲ್ಲೆಲ್ಲಿ ಹಣದ ದುರುಪಯೋಗದ ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆಯೋ ಅಂತಹ ಪ್ರಕರಣಗಳ ಬಗ್ಗೆ ತೀವ್ರ ಕ್ರಮವನ್ನು ತೆಗೆದುಕೊಳ್ಳಲಾಗಿದೆ.

ಇ) ದುರುಪಯೋಗ ಮಾಡಿದವರ ವಿರುದ್ಧ ವಸೂಲಾತಿ ಶಿಸ್ತು ಹಾಗೂ ಕ್ರಿಮಿನಲ್ ಮೊಕದ್ದಮೆಗಳನ್ನು ಹೂಡುವಂತೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಿಗೆ ಸೂಚಿಸಲಾಗಿದೆ. ದುರುಪಯೋಗದಲ್ಲಿ ಭಾಗಿಯಾದ 68 ಜನರನ್ನು ಕೆಲಸದಿಂದ ವಜಾ ಮಾಡಲಾಗಿದೆ. ಹಾಗೂ 55 ಕ್ರಿಮಿನಲ್ ಮೊಕದ್ದಮೆಗಳನ್ನು ಹೂಡಲಾಗಿದೆ. ದುರುಪಯೋಗದ ಒಟ್ಟು ಹಣ ರೂ. 241.70 ಲಕ್ಷಗಳ ಪೈಕಿ ರೂ. 42.77 ಲಕ್ಷ ವಸೂಲಿ ಆಗಿದ್ದು, ಉಳಿದ ಹಣದ ವಸೂಲಾತಿಗೆ ಬ್ಯಾಂಕುಗಳು ಕಾನೂನು ಪ್ರಕಾರ ಕ್ರಮವಿಟ್ಟಿದೆ.

ರಾಜ್ಯದಲ್ಲಿ ಬೆಂಬಲ ಬೆಲೆಗೆ ಖರೀದಿ ಮಾಡಿರುವ ಆಹಾರ ಪದಾರ್ಥಗಳು

138(179) ಶ್ರೀ ಕೃಷ್ಣಪ್ಪ.ವಿ. (ದೊಡ್ಡಬಳ್ಳಾಪುರ) ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ 2001-02ನೇ ಸಾಲಿನ ಮುಂಗಾರು, ಹಿಂಗಾರು, ಬೇಸಿಗೆ ಹಂಗಾಮುಗಳಲ್ಲಿ ಉತ್ಪಾದನೆಯಾದ ಆಹಾರ ಪದಾರ್ಥಗಳೆಷ್ಟು?

ಆ) ಸರ್ಕಾರ ರೈತರಿಂದ ಬೆಂಬಲ ಬೆಲೆಗೆ ಈವರಿಗೆ ಖರೀದಿ ಮಾಡಿರುವ ಆಹಾರ ಪದಾರ್ಥಗಳ ದಾಸ್ತಾನು ಪ್ರಮಾಣ ಎಷ್ಟು? ಇದಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ತೊಡಗಿಸಿರುವ ಹಣವೆಷ್ಟು?